ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮುಖ್ಯ ಅಭಿಯಂತರವರ ಕಛೇರಿ, ರಾಜರಾಜೇಶ್ವರಿನಗರ ವಲಯ, ಬೆಂಗಳೂರು–98

ಸಂಖ್ಯೆ:ಮುಅ/ರಾ.ರಾ.ನ/ತಾ.ಮಂ/ 100 /2021–22 ದಿನಾಂಕ: 09.12.2021

"ಮಾರ್ಪಡಿತ ತಾಂತ್ರಿಕ ಮಂಜೂರಾತಿ ಪತ್ರ"

ವಿಷಯ :– **"Modified Estimate for Additional Works to Construction of Shuttle cock Ground in Ward No.17 RR Nagar Constituency"** ರ ಕಾಮಗಾರಿಗೆ ತಾಂತ್ರಿಕ ಮಂಜೂರಾತಿ ನೀಡುವ ಬಗ್ಗೆ.

ಉಲ್ಲೇಖ :– **ಮು.ಅ/ರಾ.ರಾ.ನ/ಟಿ.ಎಸ್–289/2020–21, ದಿನಾಂಕ : 21.12.2021.**

ಪ್ರಸ್ತಾವನೆ:–

ಕಾರ್ಯಪಾಲಕ ಅಭಿಯಂತರರು(ಯೋಜನೆ–ರಾರಾನಗರ) ರವರು ಮೇಲ್ಕಂಡ ಕಾಮಗಾರಿಯ ಮಾರ್ಪಡಿತ ಅಂದಾಜು ಪಟ್ಟಿಯನ್ನು **ರೂ.5,51,55,944/–ಗಳ** ಮೊತ್ತಕ್ಕೆ ತಯಾರಿಸಿ, ಮಾರ್ಪಾಡು ತಾಂತ್ರಿಕ ಮಂಜೂರಾತಿ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಕಾರ್ಯಪಾಲಕ ಅಭಿಯಂತರರು(ಯೋಜನೆ–ರಾರಾನಗರ) ರವರ ಪ್ರಸ್ತಾವನೆಯನ್ನು ಪರಿಗಣಿಸಿ ಈ ಕೆಳಕಂಡ ಆದೇಶ ಹೊರಡಿಸಲಾಗಿದೆ.

ಸದರಿ **"Modified Estimate for Additional Works to Construction of Shuttle cock Ground in Ward No.17 RR Nagar Constituency"** ರ ಕಾಮಗಾರಿಯ ಮಾರ್ಪಡಿತ ಅಂದಾಜು ಮೊತ್ತ **ರೂ.5,51,55,944/–** ಮೊತ್ತಕ್ಕೆ 2019–20ನೇ ಸಾಲಿನ ಲೆಕ್ಕಶೀರ್ಷಿಕೆ **P-3588**ರಲ್ಲಿ ಮೀಸಲಿಟ್ಟಿರುವ ಅನುದಾನದಡಿಯಲ್ಲಿ ಜಾಬ್‌ಸಂಖ್ಯೆ:**017–20–000019** ನೀಡಲಾಗಿರುತ್ತದೆ. ಉಲ್ಲೇಖ (1)ರಲ್ಲಿ ನಿಡಲಾಗಿರುವ ತಾಂತ್ರಿಕ ಮಂಜೂರಾತಿಯನ್ನು ರದ್ದುಪಡಿಸಿ, ಸದರಿ ಮಾರ್ಪಡಿತ ಅಂದಾಜು ಪಟ್ಟಿಗೆ ಈ ಕಛೇರಿಯ ತಾಂತ್ರಿಕ ಮಂಜೂರಾತಿ ದಾಖಲಾತಿಯ ವಹಿಯ **ಕ್ರಮ ಸಂಖ್ಯೆ : 100** ಮತ್ತು **ಪುಟ ಸಂಖ್ಯೆ: 30–31** ರಲ್ಲಿ ನೊಂದಾಯಿಸಿ **ರೂ.5,51,55,944/–(ರೂ.ಐದು ಕೋಟಿ ಐವತ್ತೊಂದು ಲಕ್ಷದ ಐವತ್ತೈದು ಸಾವಿರದ ಒಂಬೈ ನೂರ ನಲವತ್ತ ನಾಲ್ಕು ಮಾತ್ರ) ಗಳಿಗೆ** ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದೆ.

ಷರತ್ತುಗಳು :–

1. ಈ ಹಿಂದೆ ತಾಂತ್ರಿಕ ಮಂಜೂರಾತಿ ಅನುಮೋದನೆ ನೀಡಲಾದ ಅಂದಾಜುಗಳಲ್ಲಿನ ಬಾಬ್ತುಗಳು ಮತ್ತು ಬಾಬ್ತುಗಳ ಪರಿಮಾಣಗಳು ಈ ಅಂದಾಜಿನಲ್ಲಿ ಮರುಕಳಿಸದಿರುವುದಕ್ಕೆ ಪರಿಶೀಲಿಸಿ, ದೃಢೀಕರಿಸಿಕೊಂಡ ನಂತರವೇ ಈ ಕಾಮಗಾರಿಗಳನ್ನು ಕೈಗೊಳ್ಳುವಲ್ಲಿ ಸೂಕ್ತ ಕ್ರಮ ಅನುಸರಿಸತಕ್ಕದ್ದು.
2. ಅಂದಾಜುಪಟ್ಟಿಯ ಮೊತ್ತವು ಮಂಜೂರಾತಿಯಾದ ಮೊತ್ತಕ್ಕಿಂತ ಮೀರಬಾರದು, ಹಾಗೂ ಕಾಮಗಾರಿಗೆ ಮಂಜೂರಾದ ಮೊತ್ತದ ಹಣವನ್ನು ಅದೇ ಕಾಮಗಾರಿಗೆ ಉಪಯೋಗಿಸತಕ್ಕದ್ದು.
3. ಕಾಮಗಾರಿಯನ್ನು ಐ.ಆರ್.ಸಿ/ಐ.ಎಸ್. ಮಾರ್ಗ ಸೂಚಿಗಳಂತೆ, ಮತ್ತು ನಿಗಧಿತ ವಿಶಿಷ್ಟ ವಿವರಣೆಯ (Standard Specification) ಪ್ರಕಾರ ನಿರ್ವಹಿಸತಕ್ಕದ್ದು.
4. ಕಾಮಗಾರಿ ಪೂರ್ಣಗೊಂಡ ನಂತರ ನಿಗಧಿತ ಅವಧಿಯೊಳಗೆ ಯುಟಿಲೈಜ಼ೇಷನ್ ಪ್ರಮಾಣ ಪತ್ರ ಹಾಗೂ ಕಾಮಗಾರಿ ಪೂರ್ಣಗೊಂಡ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು.
5. ಮಂಜೂರಾದ ಕಾಮಗಾರಿಯಲ್ಲಿ ಯಾವುದೇ ಬದಲಾವಣೆ ಅಥವಾ ಮಾರ್ಪಾಡು ಆಗಿದ್ದಲ್ಲಿ ಅನುಷ್ಠಾನ ಅಧಿಕಾರಿಗಳೇ ಜವಾಬ್ದಾರರಾಗಿರುತ್ತಾರೆ

ಪು.ತಿ.ನೋ.....

Scanned by TapScanner

6. ಸದರಿ ಕಾಮಗಾರಿಗೆ ನೀಡಲಾದ ನಿವೇಶನದ ಲಭ್ಯತೆ ಬಗ್ಗೆ ಟೆಂಡರ್ ಕರಾರು ಮಾಡುವ ಮುನ್ನ ಕ್ರ ಕೊಳ್ಳ ತಕ್ಕದ್ದು.
7. ನಿಗದಿಯಾದ ದರಪಟ್ಟಿಯಲ್ಲಿಲ್ಲದ ದರಗಳಿಗೆ (Data Rate) ಮತ್ತು ದರಗಳ ವಿವರಗಳಿಗೆ (Rate Analysis) ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯತಕ್ಕದ್ದು.
8. ಅಂದಾಜು ಪಟ್ಟಿಯಲ್ಲಿ ಅಳವಡಿಸಿರುವ ಇಡಗಂಟು ರೂಪದಲ್ಲಿ ಒದಗಿಸಲಾಗಿರುವ (LumpSum Provisions) ಮೊತ್ತಗಳಿಗೆ ಉಪಅಂದಾಜನ್ನು ತಯಾರಿಸಿ ಅನುಮೋದನೆ ಪಡೆಯತಕ್ಕದ್ದು.
9. ತೆರವುಗೊಳಿಸಿರುವ ಉಪಯುಕ್ತ ಸಾಮಾಗ್ರಿಗಳ ಬಗ್ಗೆ **MAS** ನ ವಹಿಯಲ್ಲಿ ದಾಖಲಿಸುವುದು ಹಾಗೂ ಈ ತರಹದ ಉಪಯುಕ್ತ ಸಾಮಾಗ್ರಿಗಳನ್ನು ಬೇರೆಡೆ ಉಪಯೋಗಿಸಿರುವ (ಮರು ಬಳಿಕೆ ಮಾಡಿರುವ) ಬಗ್ಗೆ ಪ್ರತ್ಯೇಕ ವಹಿಯಲ್ಲಿ ದಾಖಲಿಸಿ ದೃಢೀಕರಿಸಿಕೊಳ್ಳುವುದು.

ಮುಖ್ಯ ಅಭಿಯಂತರರು
ರಾಜರಾಜೇಶ್ವರಿನಗರವಲಯ
ಬೃಹತ್ ಬೆಂಗಳೂರು ಮಹಾನಗರಪಾಲಿಕೆ

ಪ್ರತಿಯನ್ನು:-

1. ಕಾರ್ಯಪಾಲಕ ಅಭಿಯಂತರರು (ಯೋಜನೆ-ರಾರಾನಗರ) ರವರ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
2. ಮುಖ್ಯ ಲೆಕ್ಕಾಧಿಕಾರಿಯವರ ಗಮನಕ್ಕೆ ಕಳುಹಿಸಿದೆ.
3. ಕಛೇರಿ ಕಡತಕ್ಕೆ.

Scanned by TapScanner